66

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಬೀದರ್ ಜಿಲ್ಲೆ, ಹುಮ್ನಾಬಾದ್ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆ (ಪ-I)ಕ್ಕೆ ಸರ್ಕಾರದ ತಾತ್ಕಾಲಿಕ ಅನುಮೋದನೆ ನೀಡುವ ಕುರಿತು.

ಓದಲಾಗಿದೆ: 1) ಸರ್ಕಾರಿ ಆದೇಶ ಸಂಖ್ಯೆ:ನಅಇ 59 ಬೆಮಪ್ರಾ 2007 ದಿ:09.04.2007.

2) ಹುಮ್ನಾಬಾದ್ ಪುರಸಭಾ ಯೋಜನಾ ಪ್ರಾಧಿಕಾರದ ಪತ್ರ ಸಂಖ್ಯೆ: ಪುಯೋಪುಹು:ಮಾಪ್ಲಾ:2010-11, ದಿ:30-10-2010.

3) ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಕಛೇರಿಯ ಏಕ ಕಡತ ಸಂಖ್ಯೆ:ನಗ್ರಾಯೋ:7 :ಉನಿ(ಯೋವಿ) :ಮ.ಯೋ(ಪ-1):ತಾತ್ಕಾಲಿಕ:100:2010-11ರಲ್ಲಿ ನೀಡಿರುವ ಅಭಿಪ್ರಾಯ ದಿನಾಂಕ;13.12.2010.

*****

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮಾಂಕ (1)ರ ಸರ್ಕಾರದ ಆದೇಶದಲ್ಲಿ ಹುಮ್ನಾಬಾದ್ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆಗೆ ತಾತ್ಕಾಲಿಕ ಅನುಮೋದನೆ ನೀಡಿ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮಾಂಕ (2)ರ ಪತ್ರದಲ್ಲಿ ಪುರಸಭಾ ಯೋಜನಾ ಪ್ರಾಧಿಕಾರವು ಹುಮ್ನಾಬಾದ್ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆಯನ್ನು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 13(ಡಿ)ರನ್ವಯ ಪರಿಷ್ಕರಿಸಿ, ಮಹಾ ಯೋಜನೆ (ಪರಿಷ್ಕೃತ-1)ನ್ನು ರೂಪಿಸಿ ಸರ್ಕಾರದ ತಾತ್ಕಾಲಿಕ ಅನುಮೋದನೆಗಾಗಿ ಪ್ರಸ್ತಾವನೆಯನ್ನು ಸಲ್ಲಿಸಿದೆ.

ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಕಛೇರಿ ★ ಬೆಂಗಳೂರು ★
ಕ್ರಮ ಸಂಖ್ಯೆ: 6
ದಿನಾಂಕ: 6/4/11

ಮೇಲೆ ಓದಲಾದ ಕ್ರಮಾಂಕ (3)ರ ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರು, ಹುಮ್ನಾಬಾದ್ ಪಟ್ಟಣದ ಜನಸಂಖ್ಯೆಯು 2021ರಲ್ಲಿ 7,200 ಗಳಿಗೆ ಬೆಳವಣಿಗೆಯಾಗುವುದಾಗಿ ಅಂದಾಜಿಸಿ ಮಹಾ ಯೋಜನೆ (ಪರಿಷ್ಕೃತ-I)ನ್ನು ರೂಪಿಸಲಾಗಿದೆ. ಹುಮ್ನಾಬಾದ್ ಪಟ್ಟಣದ ಜನಸಂಖ್ಯೆ, ಸಾಮಾಜಿಕ ಮತ್ತು ಆರ್ಥಿಕ ಸ್ಥಿತಿಗತಿ, ಹಾಲಿ ಬೆಳವಣಿಗೆಯ ಗತಿ, ಹವಾಗುಣ, ರಸ್ತೆಗಳ ಹಾಲಿ ಪರಿಚಲನೆ ವ್ಯವಸ್ಥೆಯ ಸಮಸ್ಯೆಗಳನ್ನು ವಿಶ್ಲೇಷಿಸಿ, ಯೋಜನಾ ತತ್ವಗಳಿಗೆ ಅನುಗುಣವಾಗಿ ಹಾಗೂ ಮಹಾ ಯೋಜನೆಯ ತಯಾರಿಕೆ ಬಗ್ಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಪ್ರಕರಣ (9) ರಿಂದ (12)ರವರೆಗೆ ನಿಗದಿಪಡಿಸಿರುವ ಅಂಶಗಳನ್ನು ಪರಿಗಣಿಸಿ, ನಗರದ ಯೋಜಿತ ಬೆಳವಣಿಗೆಗಾಗಿ ಪ್ರಸ್ತಾಪಿಸಿರುವ ಒಟ್ಟು 960.00 ಹೆಕ್ಟೇರ್ ಪ್ರದೇಶದಲ್ಲಿ ವಸತಿಗಾಗಿ 520.80 ಹೆಕ್ಟೇರ್ (ಶೇ.54.25), ವಾಣಿಜ್ಯಕ್ಕಾಗಿ 38.00 ಹೆಕ್ಟೇರ್ (ಶೇ.3.96), ಕೈಗಾರಿಕೆಗಾಗಿ 25.53 ಹೆಕ್ಟೇರ್ (ಶೇ.2.67), ಸಾರ್ವಜನಿಕ : ಅರೆ ಸಾರ್ವಜನಿಕ ಉಪಯೋಗಕ್ಕೆ 62.97 ಹೆಕ್ಟೇರ್ (ಶೇ.6.56) ಉದ್ಯಾನವನ ಮತ್ತು ಬಯಲು ಜಾಗಕ್ಕಾಗಿ 80.48 ಹೆಕ್ಟೇರ್ (ಶೇ.8.38), ಸಾರಿಗೆ/ಸಂಪರ್ಕ ವಲಯಕ್ಕೆ 227.34 ಹೆಕ್ಟೇರ್ (ಶೇಕಡ 23.67) ಹಾಗೂ ನಾಗರೀಕ ಸೌಲಭ್ಯಕ್ಕಾಗಿ 4.88 ಹೆಕ್ಟೇರ್ (ಶೇ.0.51) ಪ್ರದೇಶವನ್ನು ನಿಗಧಿಪಡಿಸಲಾಗಿದೆ. ಮಹಾ

ಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 13(1)ರನ್ವಯ ಸರ್ಕಾರದ ತಾತ್ಕಾಲಿಕ ಅಂತಿಮ ಅನುಮೋದನೆ ನೀಡಲು ಶಿಫಾರಸ್ಸು ಮಾಡಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ. ಪ್ರಸ್ತಾವನೆಯನ್ನು ಪರಿಶೀಲಿಸಿದ ನಂತರ ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ನಅಇ 204 ಗುಅಪ್ರಾ 2010**

**ಬೆಂಗಳೂರು, ದಿನಾಂಕ:31.03.2011**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ಸರ್ಕಾರವು ಹುಮ್ನಾಬಾದ್ ಪಟ್ಟಣದ ಸ್ಥಳೀಯ ಯೋಜನ ಆ ಪ್ರದೇಶಕ್ಕೆ ರೂಪಿಸಿರುವ ಮಹಾ ಯೋಜನೆ (ಪರಿಷ್ಕೃತ–I)ಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಪ್ರಕರಣ 13(1)ರನ್ವಯ ಸರ್ಕಾರದ. ತಾತ್ಕಾಲಿಕ ಅನುಮೋದನೆ ನೀಡಲಾಗಿದೆ.

ಮಹಾ ಯೋಜನೆ (ಪರಿಷ್ಕೃತ–I)ಗೆ ಕ್ಕೆ ತಾತ್ಕಾಲಿಕ ಅನುಮೋದನೆ ನೀಡಿದ ಗುರುತಾಗಿ ವರದಿ ಹಾಗೂ ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎಂ.ಎಂ.ಹಿರೇಮಠ)
ಸರ್ಕಾರದ ಅಧೀನ ಕಾರ್ಯದರ್ಶಿ
ನಗರಾಭಿವೃದ್ಧಿ ಇಲಾಖೆ

ಇವರಿಗೆ: ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು ಇವರಿಗೆ ಮುಂದಿನ ರಾಜ್ಯ ಪತ್ರದಲ್ಲಿ ಪ್ರಕಟಿಸಲು.

ಪ್ರತಿಯನ್ನು:

1. ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೊಜನಾ ಇಲಾಖೆ, ಬೆಂಗಳೂರು
2. ಮುಖ್ಯಾಧಿಕಾರಿಗಳು, ಪುರಸಭಾ ಯೋಜನಾ ಪ್ರಾಧಿಕಾರ, ಹುಮ್ನಾಬಾದ್.
3. ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರು, ಹುಮ್ನಾಬಾದ್ ಇವರಿಗೆ ಮಾಹಿತಿಗಾಗಿ.
4. ಮಾನ್ಯ ಮುಖ್ಯಮಂತ್ರಿಯವರ ಕಾರ್ಯದರ್ಶಿಯವರ ಅಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
5. ಕರ್ನಾಟಕ ರಾಜ್ಯ ಪತ್ರ.
6. ಶಾಖಾ ರಕ್ಷಣಾ ಕಡತ/ಹೆಚ್ಚುವರಿ ಪ್ರತಿಗಳು.